# ಕರ್ನಾಟಕ ಸರ್ಕಾರ

ಸಂಖ್ಯೆ:ಕಪಂರಾಆ/ಅಭಿವೃದ್ಧಿ/452/2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:11.11.2021.

## ಸುತ್ತೋಲೆ

**ವಿಷಯ:** ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ಮೇಲ್ವಿಚಾರಕರುಗಳ ಕೆಲಸದ ಅವಧಿಯನ್ನು ದೃಢೀಕರಿಸುವ ಕುರಿತು.

***

ಸರ್ಕಾರದ ಆದೇಶ ಸಂಖ್ಯೆ:ಆರ್.ಡಿ.ಪಿ.ಆರ್/62/ಜಿ.ಪಿ.ಎಸ್./2020, ಬೆಂಗಳೂರು, ದಿನಾಂಕ:27.08.2021ರನ್ವಯ ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರದ ಗ್ರಂಥಾಲಯ ಮೇಲ್ವಿಚಾರಕರ ಗೌರವಧನ ರೂ.12,000/-ಗಳನ್ನು ಪಾವತಿಸಲು ಆದೇಶಿಸಿದೆ. ಗ್ರಾಮ ಪಂಚಾಯಿತಿ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರದ ಕೆಲಸದ ವೇಳೆಯನ್ನು ದಿನಾಂಕ:01.06.2021ರಿಂದ ಜಾರಿಗೆ ಬರುವಂತೆ ಪ್ರಸ್ತುತ ಇರುವ 4 ಗಂಟೆಯಿಂದ 6 ಗಂಟೆಯವರೆಗೆ ನಿಗಧಿಪಡಿಸಿದೆ.

ಸದರಿ ಆದೇಶದನ್ವಯ ಗ್ರಂಥಾಲಯ ಮೇಲ್ವಿಚಾರಕರು 6 ಗಂಟೆಗಳ ಕಾಲ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂಬುದರ ಬಗ್ಗೆ ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಖಾತರಿಪಡಿಸಿಕೊಂಡು, ದೃಢೀಕರಿಸಿಕೊಂಡು ಗೌರವ ಸಂಭಾವನೆಯನ್ನು ಪಾವತಿಸಲು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಲು ಈ ಮೂಲಕ ತಿಳಿಸಿದೆ.

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ(ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ(ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮುಖಾಂತರ)

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಆಯುಕ್ತರು, ಇವರ ಆಪ್ತ ಸಹಾಯಕರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ. ರಸ್ತೆ, ಬೆಂಗಳೂರು.
4. ಕಛೇರಿ ರಕ್ಷಾ ಕಡತಕ್ಕೆ.